ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) –

569 (509) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಹಲವಾರು ಕಂತುಗಳ ಅನುದಾನ ಬಿಡುಗಡೆಯಾಗದಿರುವುದರಿಂದ ಪ್ರಗತಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ಅನುದಾನವನ್ನು ಸಕಾಲದಲ್ಲಿ ಬಿಡುಗಡೆ ಮಾಡದಿರಲು ಕಾರಣಗಳೇನು;

(ಇ) 2018-19, 2019-20 ಮತ್ತು 2020-21ನೇ ಸಾಲಿನಲ್ಲಿ ಪ್ರತಿಯೊಬ್ಬ ಶಾಸಕರಿಗೆ ಬಿಡುಗಡೆಯಾಗಿರುವ ಅನುದಾನದ ವಿವರಗಳನ್ನು ವರ್ಷವಾರು ನೀಡುವುದು;

(ಈ) ಬಾಕಿ ಇರುವ ಅನುದಾನವನ್ನು ಬಿಡುಗಡೆಗೊಳಿಸಲಾಗುವುದೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಬಿಡುಗಡೆ ಗೊಳಿಸಲಾಗುವುದು?